ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1112
ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 13-03-2020
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆಗಳು	ಉತ್ತರ
ಅ	ದೊಡ್ಡ ದೊಡ್ಡ ಗ್ರಾಮ ಪಂಚಾಯತಿಗಳನ್ನು ಪುನರ್ ವಿಂಗಡನೆ ಮಾಡಿ ಮೇಲ್ದರ್ಜೆಗೇರಿಸುವ ನಂಜಯ್ಯನಮಠ ವರದಿಯನ್ನು ಹಿಂದಿನ ಸರ್ಕಾರ ಅಂಗೀಕರಿಸಿದ್ದರೂ, ಅದು ಇನ್ನು ಪರಿಣಾಮಕಾರಿಯಾಗಿ ಜಾರಿಯಾಗದಿರುವುದು ಸರ್ಕಾರ ಗಮನಕ್ಕೆ ಬಂದಿದಿಯೇ:	ಬೆಳಗಾವಿ ಜಿಲ್ಲೆಯ ದೊಡ್ಡ ದೊಡ್ಡ ಗ್ರಾಮ ಪಂಚಾಯತಿಗಳನ್ನು ಪುನರ್ ವಿಂಗಡನೆ ಮಾಡಿ ರಾಯಬಾಗ ತಾಲ್ಲೂಕಿನ ಹಾರೂಗೇರಿ, ಮುಗಳಖೋಡ, ಅಥಣಿ ತಾಲ್ಲೂಕಿನ ಉಗಾರಖುರ್ದ ಹಾಗೂ ಸವದತ್ತಿ ತಾಲ್ಲೂಕಿನ ಮುನವಳ್ಳಿ ಒಟ್ಟು 4 ಗ್ರಾಮ ಪಂಚಾಯತಿಗಳನ್ನು ಪುರಸಭೆಗಳನ್ನಾಗಿ ಮತ್ತು ರಾಯಬಾಗ ತಾಲ್ಲೂಕಿನ ಚಿಂಚಲಿ, ಕಂಕನವಾಡಿ ಅಥಣಿ ತಾಲ್ಲೂಕಿನ ಐನಾಪೂರ ಶೇಡಬಾಳ, ಚಿಕ್ಕೋಡಿ ತಾಲ್ಲೂಕಿನ ಬೋರಗಾಂವ, ಯಕ್ಸಂಬಾ ಮತ್ತು ಕಬ್ಬೂರ ಗೋಕಾಕ ತಾಲ್ಲೂಕಿನ ಕಲ್ಲೋಳ್ಳಿ, ಮಲ್ಲಾಪೂರ ಪಿ ಜಿ., ನಾಗನೂರ ಮತ್ತು ಅರಭಾಂವಿ ಬೈಲಹೊಂಗಲ ತಾಲ್ಲೂಕಿನ ಕಿತ್ತೂರ ಮತ್ತು ಎಂ.ಕೆ. ಹುಬ್ಬಳ್ಳಿ ಒಟ್ಟು 13 ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾನ್ನಾಗಿ ಮೇಲ್ದರ್ಜೆಗೇರಿಸಲಾಗಿರುತ್ತದೆ. ಒಟ್ಟು 17 ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ.
ಆ	ಬಂದಿದ್ದಲ್ಲಿ, ಈ ವರದಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು:	ಅನ್ವಯಿಸುವುದಿಲ್ಲ.
ಇ	ಬೆಳಗಾವಿ ಜಿಲ್ಲೆಯ ದೊಡ್ಡ ದೊಡ್ಡ ಗ್ರಾಮ ಪಂಚಾಯತಿಗಳಾದ ಕಾಗವಾಡ, ಮಚ್ಚೆ, ಪೀರನವಾಡಿ ಮತ್ತು ಅಂಕಲಿ ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸುವ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು: ಇದು ಯಾವ ಹಂತದಲ್ಲಿದೆ.(ವಿವರ ನೀಡುವುದು),	ಬೆಳಗಾವಿ ಜಿಲ್ಲೆಯ ಕಾಗವಾಡ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾವನೆ ಸ್ವೀಕೃತವಾಗಿದ್ದು, ಕರ್ನಾಟಕ ಪುರಸಭೆಗಳ ಕಾಯ್ದೆ 1964ರ ಕಲಂ 3, 9 ಮತ್ತು 349ರನ್ವಯ ಪರಿಶೀಲನೆಯಲ್ಲಿರುತ್ತದೆ. ಮುಂದುವರೆದು, ಮಚ್ಚೆ, ಪೀರನವಾಡಿ ಮತ್ತು ಅಂಕಲಿ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸುವ ಸಂಬಂಧ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.
ಈ	ಬೆಳಗಾವಿ ಜಿಲ್ಲೆಯಲ್ಲಿ ಬಿಟ್ಟು ಹೋಗಿರುವ ಮತ್ತು ಸರ್ಕಾರದ ನಿಯಮಾವಳಿಗಳನ್ನು ಪೂರೈಸುವಂತಹ ದೊಡ್ಡ ದೊಡ್ಡ ಗ್ರಾಮ ಪಂಚಾಯತಿಗಳನ್ನು ಮುಂದಿನ ಗ್ರಾಮ ಪಂಚಾಯತಿ ಚುನಾವಣೆ ಒಳಗಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಸರ್ಕಾರದ ನಿಲುವೇನು (ವಿವರ ನೀಡುವುದು)	ಬೆಳಗಾವಿ ಜಿಲ್ಲೆಯಲ್ಲಿ ಬಿಟ್ಟು ಹೋಗಿರುವ ಮತ್ತು ಸರ್ಕಾರದ ನಿಯಮಾವಳಿಗಳನ್ನು ಪೂರೈಸುವಂತಹ ದೊಡ್ಡ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಸೂಕ್ತ ಹಾಗೂ ಅರ್ಹ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇರುವುದಿಲ್ಲ.
ಉ	ಯಾವ ಕಾಲಮಿತಿಯಲ್ಲಿ ಸದರಿ ದೊಡ್ಡ ದೊಡ್ಡ ಗ್ರಾಮ ಪಂಚಾಯತಿಗಳನ್ನು ಪುನರ್ ವಿಂಗಡಿಸಿ ಪಟ್ಟಣ ಪಂಚಾಯತಿ/ಪುರಸಭೆಗಳಾಗಿ ಮೇಲ್ದರ್ಜೆಗೇರಿಸಲಾಗುವುದು(ವಿವರ ನೀಡುವುದು)	ಜನಗಣತಿ ನಿರ್ದೇಶನಾಲಯ, ಭಾರತ ಸರ್ಕಾರದ ದಿನಾಂಕ:16.09.2019ರ ಪತ್ರದನ್ವಯ 2020ರ ಜನಗಣತಿ ಕಾರ್ಯಾಚರಣೆಯ ಅವಧಿಯಾದ ದಿನಾಂಕ:01.01.2020 ರಿಂದ 31.03.2021ರವರೆಗೆ ಅಸ್ತಿತ್ವದಲ್ಲಿರುವ ತಾಲ್ಲೂಕುಗಳ, ಗ್ರಾಮ ಪಂಚಾಯಿತಿಗಳ, ಮುನಿಸಿಪಾಲಿಟಿಗಳ ಆಡಳಿತಾತ್ಮಕ ಗಡಿಗಳನ್ನು (Administrative Boundaries) ಮಾರ್ಪಾಡು ಮಾಡದಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಪ್ರಸ್ತುತ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಅವಕಾಶವಿರುವುದಿಲ್ಲ.

ಸಂ. ಗ್ರಾಅಪ 265 ಗ್ರಾಪಂಅ 2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.